## ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೆಂಟ್/ಉಪಲೋಕ್/ಬಿಡಿ/2982/2021 ಬಹುಮಹಡಿಗಳ ಕಟ್ಟಡ,
ಮಂಡನಾಧಿಕಾರಿಗಳ ಶಾಖೆ, ಪಿ.ಒ. ಎ.ಆರ್.ಇ.17 ಡಾ: ಅಂಬೇಡ್ಕರ್ ವೀದಿ,ಬೆಂಗಳೂರು,
ದಿನಾಂಕ: 29/04/2022

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ

*****

ವಿಷಯ: ಸರ್ಕಾರಿ ನೌಕರರಾದ ಶ್ರೀ ಹೆಚ್. ವಿ. ದಾಮೋದರ ಬಿನ್ ಲೇಟ್ ವೆಂಕಟಪ್ಪ, ತಾಲ್ಲೂಕು ಅಭಿವೃದ್ಧಿ ಅಧಿಕಾರಿ, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ದಾವಣಗೆರೆ ಜಿಲ್ಲೆ ಇವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

1) ಪೋಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಪೂರ್ವ ವಲಯ, ದಾವಣಗೆರೆ ಇವರು ದಾವಣಗೆರೆ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹ ದಳ ಪೋಲೀಸ್ ಠಾಣೆಯ ಪೋಲೀಸ್ ಉಪಾಧೀಕ್ಷಕರು (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ.) ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ ವರದಿಯಲ್ಲಿ ಶ್ರೀ ಹೆಚ್. ವಿ. ದಾಮೋದರ ಬಿನ್ ಲೇಟ್ ವೆಂಕಟಪ್ಪ, ತಾಲ್ಲೂಕು ಅಭಿವೃದ್ಧಿ ಅಧಿಕಾರಿ, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ದಾವಣಗೆರೆ ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ಇವರನ್ನು ಶ್ರೀ ಎಲ್ ನಾಗಾನಾಯ್ಕ, ಬಿನ್ ಲೇಟ್ ಸೋಮ್ಲಾನಾಯ್ಕ, ಕುಂಚೂರು ಕೆರೆ ತಾಂಡಾ, ಹರಪನಹಳ್ಳಿ ತಾಲ್ಲೂಕು (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಭೇಟಿ ಮಾಡಿದಾಗ ಲಂಚದ ಹಣಕ್ಕೆ ಬೇಡಿಕೆ ಇಟ್ಟು, ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

2) **ದೂರಿನ ಸಂಕ್ಷಿಪ್ತ ವಿವರಣೆ:-** ದೂರುದಾರರ ಸಹೋದರ ಹರಪನಹಳ್ಳಿ ತಾಲ್ಲೂಕು ಗಿರಿಯಾಪುರ ತಾಂಡಾದ ಶ್ರೀ ಶಂಕರನಾಯ್ಕ ಬಿನ್ ಎಲ್. ರಾಯಮಲ ನಾಯ್ಕರವರು ಅಂಗವಿಕಲರಾಗಿದ್ದು ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಬೋರ್‌ವೆಲ್ ಕೊರೆಸಲು ಕ್ರಮ ಸಂಖ್ಯೆ: 62/239 ರಂತೆ ಆಯ್ಕೆಯಾಗಿದ್ದು, ಈ ಸಂಬಂಧ ಶಂಕರನಾಯ್ಕರವರ ಪರವಾಗಿ ದೂರುದಾರರು ದಾಖಲಾತಿಗಳನ್ನು ಸಲ್ಲಿಸಲು ದಿ: 20/04/2017 ರಂದು

ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ದಾವಣಗೆರೆಗೆ ಹೋದಾಗ ದೂರುದಾರರು ಇದಕ್ಕೆ ಸಂಬಂಧಿಸಿದ ದಾಖಲಾತಿಗಳು ಮತ್ತು ಅರ್ಜಿ ನಮೂನೆಯನ್ನು ಸಲ್ಲಿಸಲು ಎದುರುದಾರರನ್ನು ಭೇಟಿಯಾದಾಗ, ಒಟ್ಟು ರೂ. 2,500/- ಗಳಿಗೆ ಲಂಚದ ಹಣಕ್ಕೆ ಬೇಡಿಕೆ ಇಟ್ಟು, ಅದರಲ್ಲಿ ರೂ. 500/- ಗಳನ್ನು ಒಪ್ಪಿಗೆ ಪತ್ರ ನೀಡಲು ಕೊಟ್ಟಿದ್ದು, ಉಳಿದ ರೂ. 2,000/- ಲಂಚದ ಹಣ ಕೊಡಲು ಇಷ್ಟವಿಲ್ಲದ ಕಾರಣ ದೂರುದಾರರು ಮೊಬೈಲ್ ನಲ್ಲಿ ತನ್ನ ಹಾಗೂ ಎದುರುದಾರರೊಂದಿಗೆ ನಡೆದ ರೆಕಾರ್ಡ್ ಮಾಡಿದ ಸಂಭಾಷಣೆಯೊಂದಿಗೆ ದಿನಾಂಕ 25/04/2017 ರಂದು ದೂರನ್ನು ನೀಡಿರುತ್ತಾರೆ. ಈ ಬಗ್ಗೆ ದಾವಣಗೆರೆ ಎ.ಸಿ.ಬಿ. ಠಾಣೆಯ ಅಧಿಕಾರಿಗಳು ದೂರನ್ನು ಪಡೆದು ತಮ್ಮ ಠಾಣೆಯ ಗುನ್ನೆ ನಂ. 06/2017 ರಲ್ಲಿ ಪ್ರಕರಣ ನೋಂದಾಯಿಸಿಕೊಂಡಿರುತ್ತಾರೆ.

3) ತನಿಖಾಧಿಕಾರಿಗಳು ದಿನಾಂಕ 25/04/2017 ರಂದು ನೆರಳು ಸಾಕ್ಷಿ ಹಾಗೂ ಸಹ ಪಂಚರನ್ನು ಬರ ಮಾಡಿಕೊಂಡು ದೂರುದಾರರನ್ನು ಪರಿಚಯಿಸಿ, ಅವರಿಂದ ದೂರಿನ ವಿಷಯವನ್ನು ತಿಳಿದ ನಂತರ ಲಂಚದ ಹಣ ರೂ. 2,000/- ದೂರುದಾರರು ಹಾಜರುಪಡಿಸಿದ್ದು, ಅವುಗಳ ಮುಖಬೆಲೆ ಮತ್ತು ನೋಟಿನ ಸಂಖ್ಯೆ ಪ್ರತ್ಯೇಕ ಹಾಳೆಯಲ್ಲಿ ನಮೂದಿಸಿ ಪಂಚರ ಮತ್ತು ತನಿಖಾಧಿಕಾರಿಗಳ ಸಹಿ ಪಡೆದಿರುತ್ತಾರೆ. ಸದರಿ ಹಣಕ್ಕೆ ಪಿನಾಪ್ತಲಿನ್ ಪೌಡರ್ ಲೇಪಿಸಿ ಸೋಡಿಯಂ ಕಾರ್ಬೋನೇಟ್ ದ್ರಾವಣ ತಯಾರಿಸಿ ಸದರಿ ದ್ರಾವಣದಲ್ಲಿ ನೋಟುಗಳಿಗೆ ಪಿನಾಪ್ತಲಿನ್ ಪೌಡರ್ ಲೇಪಿಸಿದ ಸಿಬ್ಬಂದಿ ಕಲ್ಲೇಶಪ್ಪ ಸಿ.ಪಿ.ಸಿ. ರವರ ಕೈ ಬೆರಳುಗಳನ್ನು ದ್ರಾವಣದಲ್ಲಿ ಅದ್ದಿ ತೆಗೆದಾಗ ಅದು ತಿಳಿ ಗುಲಾಬಿ ಬಣ್ಣಕ್ಕೆ ಬಂದಿರುತ್ತದೆ. ಈ ಬಗ್ಗೆ ಮಾದರಿ ದ್ರಾವಣ ಹಾಗೂ ಗುಲಾಬಿ ಬಣ್ಣಕ್ಕೆ ತಿರುಗಿದ ದ್ರಾವಣಗಳನ್ನು ಪ್ರತ್ಯೇಕವಾಗಿ ವಶಪಡಿಸಿಕೊಂಡು ಹಂತ ಹಂತವಾಗಿ ಫೋಟೋಗಳನ್ನು ತೆಗೆಸಿ ಪ್ರಕರಣದ ಮಾಹಿತಿ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ತನಿಖಾಧಿಕಾರಿಯವರು ಸೂಚಿಸಿರುತ್ತಾರೆ. ಶ್ರೀ ಶಶಿಧರ್ ಹೆಚ್. ಜೆ. ಬಿನ್ ಹೆಚ್. ಜಿ. ಜಗದೀಶ್ವರಪ್ಪ, ಪ್ರ.ದ.ಸ. ಆರ್.ಟಿ.ಓ. ಕಛೇರಿ, ದಾವಣಗೆರೆ ಇವರನ್ನು ನೆರಳು ಸಾಕ್ಷಿಯಾಗಿ ನೇಮಿಸಿ ದೂರುದಾರರೊಂದಿಗೆ ಎದುರುದಾರರ ಬಳಿ ಹೋಗಿ ಅವರಿಗೆ ಅನುಮಾನ ಬಾರದಂತೆ ಎದುರುದಾರರು ಹಾಗೂ ದೂರುದಾರರ ನಡುವೆ ನಡೆದ ಸಂಭಾಷಣೆಯನ್ನು ಕೇಳಿಸಿಕೊಂಡು ಘಟನೆಯನ್ನು ವೀಕ್ಷಿಸಿ, ಎದುರುದಾರರು ಹಣವನ್ನು ಕೇಳಿ ಪಡೆದುಕೊಂಡರೆ, ಹಣವನ್ನು ಹೇಗೆ ಪಡೆದುಕೊಳ್ಳುತ್ತಾರೆ, ಹಣವನ್ನು ಎಲ್ಲಿ ಇಟ್ಟುಕೊಳ್ಳುತ್ತಾರೆ ಎಂಬುದನ್ನು ಗಮನಿಸಿ ನಂತರ ತಿಳಿಸಬೇಕೆಂದು ತನಿಖಾಧಿಕಾರಿಯವರು ತಿಳಿಸಿರುತ್ತಾರೆ. ದೂರುದಾರರಿಗೆ ಡಿಜಿಟಲ್ ವಾಯ್ಸ್

ರೆಕಾರ್ಡರ್‌ನಲ್ಲಿ ಸಂಭಾಷಣೆಯನ್ನು ರೆಕಾರ್ಡ್ ಮಾಡುವಂತೆ ಸೂಚಿಸಿರುತ್ತಾರೆ. ದೂರುದಾರರಿಗೆ ಎದುರುದಾರರು ಲಂಚದ ಹಣ ಬೇಡಿಕೆ ಇಟ್ಟು ಸ್ವೀಕರಿಸಿದ ನಂತರ ತನ್ನ ತಲೆಯನ್ನು ಕೆರೆದುಕೊಳ್ಳುವುದರ ಮೂಲಕ ಸಂಜ್ಞೆ ನೀಡಬೇಕೆಂದು ಸೂಚಿಸಿರುತ್ತಾರೆ. ಈ ಬಗ್ಗೆ ಸವಿಸ್ತಾರ ಪ್ರಾಯೋಗಿಕ ಪಂಚನಾಮೆಯನ್ನು ನಿರ್ವಹಿಸಿರುತ್ತಾರೆ.

4) ದಿನಾಂಕ 25/04/2017 ರಂದು ಗಣೇಶ ಲೇ ಔಟ್ ನಲ್ಲಿರುವ ಡಾ. ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಕಛೇರಿಯಲ್ಲಿ ದೂರುದಾರರು ಹಾಗೂ ನೆರಳು ಸಾಕ್ಷಿ ಶ್ರೀ ಶಶಿಧರ್ ಹೆಚ್. ಜೆ. ರವರೊಂದಿಗೆ ಕಛೇರಿಯ ಒಳಗೆ ಬಂದು ಎದುರುದಾರರು ಹಣ ನೀಡುವಂತೆ ಸಂಜ್ಞೆ ಮಾಡಿರುತ್ತಾರೆ. ದೂರುದಾರರು ಫಿನಾಪ್ತಲಿನ್ ಪೌಡರ್ ಲೇಪಿತ 2,000/- ರೂಪಾಯಿಗಳನ್ನು ಲಂಚದ ಹಣವನ್ನು ಸೂಚ್ಯವಾಗಿ ಕೇಳಿ ಪಡೆದಿದ್ದು, ಎದುರುದಾರರ ಪ್ಯಾಂಟಿನ ಬಲಭಾಗದ ಜೇಬಿನಲ್ಲಿ ಇಟ್ಟುಕೊಂಡಿರುತ್ತಾರೆ. ನಂತರ ದೂರುದಾರರು ಹೊರಗಡೆ ಬಂದು ತಲೆಯನ್ನು ಕೆರೆದುಕೊಳ್ಳುವುದರ ಮೂಲಕ ನಿಗದಿತ ಸಿಗ್ನಲ್ ನೀಡಿರುತ್ತಾರೆ. ತನಿಖಾಧಿಕಾರಿಯವರು ಪಂಚರ ಸಮಕ್ಷಮ ಸದರಿ ಲಂಚದ ಹಣವಾದ 2,000/- ರೂ.ಗಳನ್ನು ಎದುರುದಾರರಿಂದ ಅಮಾನತ್ತುಪಡಿಸಿಕೊಂಡಿರುತ್ತಾರೆ. ತನಿಖಾಧಿಕಾರಿಯವರು ಎದುರುದಾರರ ಬಲಗೈ ಬೆರಳುಗಳನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ಅದೇ ರೀತಿ ಎದುರುದಾರರ ಎಡಗೈ ಬೆರಳುಗಳನ್ನು ಇನ್ನೊಂದು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ. ನಂತರ ಸದರಿ ದ್ರಾವಣಗಳನ್ನು ಪಂಚರ ಸಮಕ್ಷಮ ಅಮಾನತ್ ಪಡಿಸಿಕೊಂಡಿರುತ್ತಾರೆ. ದೂರುದಾರರು ಪಂಚ ಸಾಕ್ಷಿಗಳು, ಸಿಬ್ಬಂಧಿಯವರೊಂದಿಗೆ ತನಿಖಾಧಿಕಾರಿಗಳು ಶ್ರೀ ಶಶಿಧರ್ ಹೆಚ್. ಜೆ. ನೆರಳು ಸಾಕ್ಷಿ, ಪಂಚ ಅವರಿಂದ ಅಲ್ಲಿಯ ನಡುವಳಿಕೆಗಳನ್ನು ತಿಳಿದು ಸವಿಸ್ತಾರ ಜಪ್ತಿ ಪಂಚನಾಮೆ ನಿರ್ವಹಿಸಿರುತ್ತಾರೆ. ದೂರುದಾರರು ದೂರನ್ನು ನೀಡುವ ಪೂರ್ವದಲ್ಲಿ ಎದುರುದಾರರ ಜೊತೆ ನಡೆದ ಸಂಭಾಷಣೆಯನ್ನು ಲ್ಯಾಪ್‌ಟಾಪ್ ಮೂಲಕ ಸಿ.ಡಿ.ಗೆ ವರ್ಗಾಯಿಸಿ ಕೇಳಿ ತಿಳಿದು ಲಿಪೀಕರಣ ಮಾಡಿ ಸಿ.ಡಿ.ಯನ್ನು ವಶಪಡಿಸಿಕೊಂಡಿರುತ್ತಾರೆ. ಅದೇ ರೀತಿ ಟ್ರ್ಯಾಪ್ ಕಾಲದಲ್ಲಿ ಡಿಜಿಟಲ್ ವಾಯ್ಸ್ ರೆಕಾರ್ಡರ್‌ರಲ್ಲಿ ದೂರುದಾರರು ಮತ್ತು ಎದುರುದಾರರ ನಡುವೆ ಆದ ಸಂಭಾಷಣೆಯನ್ನು ಲ್ಯಾಪ್‌ಟಾಪ್ ಮೂಲಕ ಸಿ.ಡಿ.ಗೆ ಪರಿವರ್ತಿಸಿ ಕೇಳಿ ತಿಳಿದು ಲಿಪೀಕರಣ ಮಾಡಿ ಸಿ.ಡಿ.ಯನ್ನು ವಶಪಡಿಸಿಕೊಂಡಿರುತ್ತಾರೆ. ಸದರಿ ಸಂಭಾಷಣೆಯಲ್ಲಿನ ಎದುರುದಾರರ ಧ್ವನಿಯನ್ನು ಶ್ರೀ ಎಸ್. ಆರ್. ಗಂಗಪ್ಪ, ಜಿಲ್ಲಾ

ವ್ಯವಸ್ಥಾಪಕರು, ಡಾ. ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ದಾವಣಗೆರೆ ರವರಿಗೆ ಕೇಳಿಸಿದಾಗ ಅದರಲ್ಲಿ ಒಬ್ಬರ ಧ್ವನಿಯು ಎದುರುದಾರರ ಧ್ವನಿ ಎಂದು ಗುರುತಿಸಿರುತ್ತಾರೆ. ಈ ಪ್ರಕರಣಕ್ಕೆ ಸಂಬಂಧಪಟ್ಟ ದೃಢೀಕೃತ ದಾಖಲಾತಿಗಳನ್ನೂ ವಶಪಡಿಸಿಕೊಂಡಿರುತ್ತಾರೆ.

5) ಸದರಿ ಹಣದ ಬಗ್ಗೆ ತನಿಖಾಧಿಕಾರಿಯವರು ಎದುರುದಾರರ ಸಮಜಾಯಿಷಿ ಕೇಳಲಾಗಿ "ಶ್ರೀ ಶಂಕ್ರನಾಯ್ಕ ಸನ್ ಆಫ್ ಲೇಟ್ ರಾಯವತ್ ನಾಯ್ಕ ಗಿರಿಯಾಪುರ ತಾಂಡ ಅಲಗಿಲವಾಡ ಅಂಚೆ ಹರಪನಹಳ್ಳಿ ತಾ. ದಾವಣಗೆರೆ ಜಿಲ್ಲೆ ಇವರು 2016-17 ನೇ ಸಾಲಿನಲ್ಲಿ ಹರಪನಹಳ್ಳಿ ತಾಲ್ಲೂಕಿನ ವಿಧಾನಸಭಾ ಕ್ಷೇತ್ರದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಿದ್ದು, ಅದರಂತೆ ಕ್ರಮಸಂಖ್ಯೆ 62 ರಲ್ಲಿ ಆಯ್ಕೆಯಾಗಿದ್ದು ಅದರಂತೆ ದಾಖಲಾತಿಗಳನ್ನು ನೀಡಲು ದಿನಾಂಕ 25/04/2017 ರಂದು ಜಿಲ್ಲಾ ಕಛೇರಿಗೆ ಬಂದು ದಾಖಲಾತಿಗಳನ್ನು ನೀಡಲು ಕಛೇರಿಗೆ ಬಂದಾಗ ರೂ. 2,000/- ಹಣ ನೀಡಿರುತ್ತಾರೆ. ಅದರಂತೆ ನಾನು ಹಣವನ್ನು ಪಡೆದಿರುತ್ತೇನೆ." ಎಂದು ಲಿಖಿತ ಸಮಜಾಯಿಷಿಯನ್ನು ನೀಡಿರುತ್ತಾರೆ.

6) ತನಿಖಾಧಿಕಾರಿಯವರು ಸವಿಸ್ತಾರ ಜಪ್ತಿ ಪಂಚನಾಮೆ ಪೂರೈಸಿದ ನಂತರ ಎದುರುದಾರರನ್ನು ದಸ್ತಗಿರಿ ಮಾಡಿರುತ್ತಾರೆ.

7) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ದುರ್ನಡತೆಯನ್ನು ತೋರಿಸುತ್ತದೆ.

8) ಧ್ವನಿ ವಿಶ್ಲೇಷಣಾ ವರದಿಯಲ್ಲಿ, ಸಂಭಾಷಣೆಯಲ್ಲಿಯ ಧ್ವನಿ ಎದುರುದಾರರ ಧ್ವನಿಯೊಂದಿಗೆ ತಾಳೆಯಾಗಿರುವುದು ದೃಢಪಟ್ಟಿರುತ್ತದೆ ಹಾಗೂ ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೇ ಮಾಲುಗಳಲ್ಲಿ ಪಿನಾಪ್ತಲಿನ್ ಅಂಶ ಇರುವುದು ದೃಢಪಟ್ಟಿರುತ್ತದೆ.

9) ಎದುರುದಾರರು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಸಮಜಾಯಿಷಿಯನ್ನು ದಿನಾಂಕ 31/12/2021 ರಂದು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಷಿಯಲ್ಲಿ ತಮ್ಮ ಮೇಲಿರುವ ಇಲಾಖಾ ವಿಚಾರಣೆಯಾಗಿ ಆರೋಪ ಸಾಬೀತಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ. ಆದರೆ ಈ ಬಗ್ಗೆ ಯಾವುದೇ ದಾಖಲಾತಿಗಳನ್ನು ಎದುರುದಾರರು ಸಲ್ಲಿಸಿರುವುದಿಲ್ಲ. ಆದ್ದರಿಂದ ಎದುರುದಾರರ ಕೋರಿಕೆಯಂತೆ ಈ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ.

10) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ, ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ, ಧ್ವನಿ ವಿಶ್ಲೇಷಣಾ ವರದಿ, ರಾಸಾಯನಿಕ ತಜ್ಞರ ಪರೀಕ್ಷಾ ವರದಿ ಮತ್ತು ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೇ ಮಾಲುಗಳಲ್ಲಿ ಪಿನಾಪ್ತಲಿನ್ ಅಂಶ ಇವುಗಳನ್ನು ಪರಿಶೀಲಿಸಿದಾಗ ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

11) ಅದಲ್ಲದೆ ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ) 2021 ನಿಯಮ 3 (1) (i ರಿಂದ iii) ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದೂ ಕೋರಿದೆ.

12) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಮೂರು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

29/4/22

**(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)**
ಉಪಲೋಕಾಯುಕ್ತರು-1
ಕರ್ನಾಟಕ ರಾಜ್ಯ, ಬೆಂಗಳೂರು.